# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 403(656) |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23-12-2022 |
| ಉತ್ತರಿಸುವ ಸಚಿವರು | : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಸರ್ಕಾರಿ/ಅನುದಾನಿತ ಮತ್ತು ಖಾಸಗಿ ಶಾಲೆಗಳಲ್ಲಿ 1 ರಿಂದ 8ನೇ ತರಗತಿಯವರೆಗಿನ ಎಸ್.ಸಿ/ಎಸ್.ಟಿ/ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಕಳೆದ ಮೂರು ವರ್ಷಗಳಲ್ಲಿ ವಿತರಿಸಿರುವ ವಿದ್ಯಾರ್ಥಿ ವೇತನದ ಒಟ್ಟು ಮೊತ್ತವೆಷ್ಟು; (ವಾರ್ಷಿಕವಾರು ಪ್ರತ್ಯೇಕವಾಗಿ ವಿವರ ನೀಡುವುದು)</td><td>1 ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರ ಮತ್ತು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಈ ಕೆಳಕಂಡಂತೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿರುತ್ತದೆ.
<table>
<tr><th rowspan="2">ಕ್ರ. ಸಂ</th><th rowspan="2">ವಿದ್ಯಾರ್ಥಿಗಳು</th><th colspan="3">ಮಂಜೂರು ಮಾಡಲಾದ ವಿದ್ಯಾರ್ಥಿಗಳ ಸಂಖ್ಯೆ</th><th colspan="3">ಮಂಜೂರು ಮಾಡಲಾದ ವಿದ್ಯಾರ್ಥಿವೇತನ ಮೊತ್ತ(ಕೋಟಿಗಳಲ್ಲಿ)</th></tr>
<tr><th>2019-20</th><th>2020-21</th><th>2021-22</th><th>2019-20</th><th>2020-21</th><th>2021-22</th></tr>
<tr><td>1</td><td>ಪ.ಜಾ</td><td>794485</td><td>731528</td><td>678379</td><td>86.00</td><td>82.63</td><td>78.41</td></tr>
<tr><td>2</td><td>ಪ.ಪಂ</td><td>356212</td><td>321538</td><td>300138</td><td>40.49</td><td>36.54</td><td>34.40</td></tr>
<tr><td>3</td><td>ಅಲ್ಪಸಂಖ್ಯಾತರು</td><td>558928</td><td>477851</td><td>486180</td><td>95.76</td><td>82.73</td><td>85.23</td></tr>
<tr><td>4</td><td>ಹಿಂದುಳಿದ ವರ್ಗಗಳ</td><td>794485</td><td>731528</td><td>678379</td><td>86.00</td><td>82.63</td><td>78.41</td></tr>
</table></td></tr>
<tr><td>ಆ)</td><td>ಪ್ರಸಕ್ತ ಸಾಲಿನಲ್ಲಿ ಸದರಿ ವಿದ್ಯಾರ್ಥಿವೇತನವನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗಿದೆಯೇ?</td><td>ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗ ಪ್ರಸಕ್ತ ಸಾಲಿನಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8ನೇ ತರಗತಿ) ಕಾರ್ಯಕ್ರಮವನ್ನು ರದ್ದುಗೊಳಿಸಿರುವುದಿಲ್ಲ.<br><br>ಅಲ್ಪ ಸಂಖ್ಯಾತರ ವಿದ್ಯಾರ್ಥಿ ವೇತನವನ್ನು ಭಾರತ ಸರ್ಕಾರದ ಅಲ್ಪ ಸಂಖ್ಯಾತರ ವ್ಯವಹಾರಗಳ ಮಂತ್ರಾಲಯರವರ ಅದಿಸೂಚನೆ ಸಂಖ್ಯೆ:SS-1/2020-Scholarship-MoMA, GOI Ministry of Minority Affairs, Dated:29-11-2022ರಂತೆ National Scholarship portal (NSP)ಯೋಜನೆಯಡಿ 1 ರಿಂದ 8ನೇ ತರಗತಿಯ ವಿದ್ಯಾರ್ಥಿಗಳ ವಿದ್ಯಾರ್ಥಿವೇತನವನ್ನು ಕೇಂದ್ರ ಸರ್ಕಾರದಿಂದ ರದ್ದುಗೊಳಿಸಲಾಗಿದೆ.</td></tr>
</table>

| | | |
|---|---|---|
| ಇ) | ಈ ರೀತಿ ರದ್ದುಗೊಳಿಸಲು ಕಾರಣಗಳೇನು? | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗ ಪ್ರಸಕ್ತ ಸಾಲಿನಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8ನೇ ತರಗತಿ) ಕಾರ್ಯಕ್ರಮವನ್ನು ರದ್ದುಗೊಳಿಸಿರುವುದಿಲ್ಲ.<br><br>ಅಲ್ಪ ಸಂಖ್ಯಾತರ ವಿದ್ಯಾರ್ಥಿ ವೇತನವನ್ನು ಭಾರತ ಸರ್ಕಾರದ ಅಲ್ಪ ಸಂಖ್ಯಾತರ ವ್ಯವಹಾರಗಳ ಮಂತ್ರಾಲಯರವರ ಅದಿಸೂಚನೆ ಸಂಖ್ಯೆ:SS-1/2020-Scholarship-MoMA, GOI Ministry of Minority Affairs, Dated:29-11-2022ರಲ್ಲಿ 1 ರಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಶಿಕ್ಷಣವು ಉಚಿತ ಹಾಗೂ ಕಡ್ಡಾಯವಾಗಿರುವುದರಿಂದ 2022-23ನೇ ಸಾಲಿನಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು 1 ರಿಂದ 8ನೇ ತರಗತಿಯವರೆಗೆ ರದ್ದುಗೊಳಿಸಲಾಗಿದೆ. |
| ಈ) | ಇದರಿಂದದಾಗಿ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳ ಶಿಕ್ಷಣ ಮುಂದುವರಿಕೆಗೆ ತುಂಬಾ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಅನ್ವಯಿಸುವುದಿಲ್ಲ.<br><br>ಅಲ್ಪ ಸಂಖ್ಯಾತರ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ತೊಂದರೆ ಉಂಟಾಗಿರುವುದು ಗಮನಕ್ಕೆ ಬಂದಿರುತ್ತದೆ. |
| ಉ) | ಸದರಿ ವಿದ್ಯಾರ್ಥಿವೇತನವನ್ನು ಕೂಡಲೇ ಪ್ರಸಕ್ತ ಸಾಲಿನಿಂದ ಮುಂದುವರೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದ್ದು, ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಕ್ರಮವಹಿಸಲಾಗುವುದು.<br><br>ಅಲ್ಪ ಸಂಖ್ಯಾತರ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದೀಮದ ವಿದ್ಯಾರ್ಥಿ ವೇತನ ನೀಡುವ ಕುರಿತಂತೆ ರೂ.111.82 ಕೋಟಿಗಳ ಹೆಚ್ಚುವರಿ ಅನುದಾನ ಅವಶ್ಯಕತೆಯಿದ್ದು ಸದರಿ ಪ್ರಸ್ತಾವನೆಯ ಸರ್ಕಾರದ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಸಕಇ 512 ಪಕವಿ 2022**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು